ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	2021
ಸದಸ್ಯರ ಹೆಸರು	ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	24.03.2021
ಉತ್ತರಿಸುವ ಸಚಿವರು	ಕಂದಾಯ ಸಚಿವರು

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಕಾರವಾರ ಜಿಲ್ಲೆಯ ಹಳಿಯಾಳ ತಾಲ್ಲೂಕಿನ ಡೊಮಗೇರಾ ಗ್ರಾಮವನ್ನು ದಾಂಡೇಲಿ ತಾಲ್ಲೂಕಿಗೆ ಸೇರ್ಪಡೆಗೊಳಿಸಬಾರದೆಂದು ಆಗ್ರಹಿಸಿ ಗ್ರಾಮಸ್ಥರು ಪ್ರತಿಭಟನೆ ಮಾಡುತ್ತಿದ್ದು ಎಲ್ಲಾ ಅಧಿಕಾರಿಗಳಿಗೆ ಪತ್ರದ ಮುಖಾಂತರ ವಿನಂತಿಸಿಕೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)	ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ಮತ್ತು ಜೋಯಿಡಾ ತಾಲ್ಲೂಕುಗಳನ್ನು ವಿಭಜಿಸಿ ದಿನಾಂಕ: 27-01-2018 ರ ಸರ್ಕಾರದ ಅಧಿಸೂಚನೆಯಲ್ಲಿ ನೂತನ ದಾಂಡೇಲಿ ತಾಲ್ಲೂಕನ್ನು ರಚಿಸಿದ್ದು, ಪ್ರಸ್ತಾಪಿತ ಡೋಮಗೇರಾ ಗ್ರಾಮವನ್ನು ದಾಂಡೇಲಿ ತಾಲ್ಲೂಕಿಗೆ ಸೇರ್ಪಡೆಗೊಳಿಸಲಾಗಿದೆ. ಡೋಮಗೇರಾ ಗ್ರಾಮದ ಗ್ರಾಮಸ್ಥರು ಡೋಮಗೇರಾ ಗ್ರಾಮವನ್ನು ದಾಂಡೇಲಿ ತಾಲ್ಲೂಕಿಗೆ ಸೇರ್ಪಡೆಗೊಳಿಸಬಾರದೆಂದು ಆಗ್ರಹಿಸಿ ದಿನಾಂಕ:27-01-2021 ರಂದು ಜಿಲ್ಲಾಧಿಕಾರಿ, ಉತ್ತರ ಕನ್ನಡ ಜಿಲ್ಲೆ ಇವರಿಗೆ ಮನವಿ ಸಲ್ಲಿಸಿರುತ್ತಾರೆ. ಅದರಂತೆ ಈ ಗ್ರಾಮವನ್ನು ದಾಂಡೇಲಿ ತಾಲ್ಲೂಕಿಗೆ ಸೇರ್ಪಡೆ ಮಾಡಿರುವುದರಿಂದ ಆಗುತ್ತಿರುವ ತೊಂದರೆಗಳ ಬಗ್ಗೆ ಕೂಲಂಕಷವಾಗಿ ಪರಿಶೀಲಿಸಲಾಗುತ್ತಿದೆ.
ಆ)	ಡೋಮಗೇರಾ ಗ್ರಾಮದ ವಿದ್ಯಾರ್ಥಿಗಳ ವಿದ್ಯಾಭ್ಯಾಸದ ಹಿತದೃಷ್ಠಿಯಿಂದ, ಸದರಿ ಗ್ರಾಮವನ್ನು ಹಳಿಯಾಳ ತಾಲ್ಲೂಕಿನಲ್ಲಿಯೇ ಇರಲು ಕ್ರಮ ಕೈಗೊಳ್ಳಲಾಗುವುದು?	ಡೋಮಗೇರಾ ಗ್ರಾಮದ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಯಾವುದೇ ಸಮಸ್ಯೆ ಉಂಟಾಗದಂತೆ ಜಿಲ್ಲಾಡಳಿತದಿಂದ ಕ್ರಮ ವಹಿಸಲಾಗುತ್ತಿದೆ.

ಸಂಖ್ಯೆ: ಕಂಇ 30 ಎಲ್. ಆರ್.ಡಿ 2021

(ಆರ್.ಅಶೋಕ)
ಕಂದಾಯ ಸಚಿವರು